ಇ) ಹಾಗಿದ್ದಲ್ಲಿ, ಇದಕ್ಕೆ ಕಾಲಮಿತಿಯನ್ನೇನಾದರೂ ನಿಗಧಿಗೊಳಿಸಿದೆಯೇ?

**ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು**

ಅ) ಹೌದು.

ಆ) ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ.

**19, (91) ಶ್ರೀ ಕ್ಯಾತಸಂದ್ರ ಎನ್.ರಾಜಣ್ಣ (ಬೆಳ್ಳಾವಿ)** : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ದಿನಾಂಕ 30–09–2005 ರಂದು ಅಂತ್ಯಗೊಂಡ ಶಾಸಕರ ಅಧ್ಯಕ್ಷತೆಯಲ್ಲಿನ ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ತೆಗೆದುಕೊಂಡ ಕುಡಿಯುವ ನೀರಿನ ಕಾಮಗಾರಿಗಳಿಗೆ ಇದುವರೆವಿಗೂ ವಿದ್ಯುದೀಕರಣಗೊಳಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಆಗಿದ್ದಲ್ಲಿ ಈ ವಿಳಂಬಕ್ಕೆ ಕಾರಣಗಳೇನು;?

ಇ) ಹಾಗಿದ್ದಲ್ಲಿ ಈ ಕಾಮಗಾರಿಗಳನ್ನು ಪೂರೈಸಲು ಸರ್ಕಾರದ ಕಾಲಮಿತಿಯನ್ನೇನಾದರೂ ನಿಗಧಿಪಡಿಸಿದೆಯೇ;

ಈ) ಆಗಿದ್ದಲ್ಲಿ ಯಾವಾಗ ಪೂರ್ಣಗೊಳಿಸುವುದು;

ಉ) ಈ ಕಾಮಗಾರಿಗಳನ್ನು ಸಕಾಲದಲ್ಲಿ ಪೂರ್ಣಗೊಳಿಸದೇ ಇರುವುದರಿಂದ ಸರ್ಕಾರಕ್ಕೆ ಆಗಿರುವ ಆರ್ಥಿಕ ಹೊರೆ ಎಷ್ಟು; (ಕಾಮಗಾರಿವಾರು ಸಂಪೂರ್ಣ ವಿವರಗಳನ್ನು ನೀಡುವುದು)?

**ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು**

ಅ) ಕುಡಿಯುವ ನೀರು ಸರಬರಾಜು ಯೋಜನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಶಾಸಕರ ಅಧ್ಯಕ್ಷತೆಯಲ್ಲಿನ ಟಾಸ್ಕ್ ಫೋರ್ಸ್ ಸಮಿತಿಗಳಿಂದ ದೃಡೀಕರಣಗೊಂಡ 1446 ಕುಡಿಯುವ ನೀರಿನ ಯೋಜನೆಗಳ ಪೈಕಿ ಈವರೆಗೆ ಒಟ್ಟು 1049 ಯೋಜನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುತ್ತದೆ. 397 ಕುಡಿಯುವ ನೀರು ಸರಬರಾಜು ಯೋಜನೆಗಳು ಮಾತ್ರ ವಿದ್ಯುದೀಕರಣಕ್ಕಾಗಿ ಬಾಕಿ ಉಳಿದಿವೆ. ಈ 397 ಕುಡಿಯುವ ನೀರಿನ ಯೋಜನೆಗಳ ಪೈಕಿ 169 ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸಂಬಂಧಿಸಿದ ಪಂಚಾಯತ್ ರಾಜ್ ಸಂಸ್ಥೆಗಳು ಅಗತ್ಯವಿರುವ ನಿಯಮಗಳನ್ನು ಪಾಲಿಸದೇ ಇರುವುದರಿಂದ ವಿದ್ಯುತ್ ಸರಬರಾಜು ಕಂಪನಿಗಳಿಗೆ ಈ ನಿಟ್ಟಿನಲ್ಲಿ ಮುಂದುವರೆಸಲು ಸಾಧ್ಯವಾಗಿಲ್ಲ. ಬಾಕಿ ಉಳಿದ 228 ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾಮಗಾರಿಗಳು ವಿದ್ಯುತ್

ಸರಬರಾಜು ಕಂಪನಿಗಳವತಿಯಿಂದ ಪ್ರಗತಿಯಲ್ಲಿದ್ದು, ಶೀಘ್ರದಲ್ಲಿ ಪೂರ್ಣ ಗೊಳಿಸಲಾಗುವುದು.

ಆ) ವಿಳಂಬಕ್ಕೆ ಮುಖ್ಯ ಕಾರಣಗಳು :

1. ಕೆಲವು ಪ್ರಕರಣಗಳಲ್ಲಿ ವಿದ್ಯುತ್ ಲೈನುಗಳು ನಿರ್ಮಾಣಕ್ಕೆ ಅರಣ್ಯ ಇಲಾಖೆಯ ಅನುಮತಿಯನ್ನು ಪಡೆಯಬೇಕಾಗಿರುವುದರಿಂದಲೂ ಹಾಗೂ ಸ್ಥಳೀಯವಾಗಿ ಉಂಟಾಗುವ ತಕರಾರುಗಳಿಂದಲೂ ಕೆಲವು ಕುಡಿಯುವ ನೀರು ಸರಬರಾಜು ಯೋಜನೆಗಳ ಕಾಮಗಾರಿಗಳಲ್ಲಿ ಉಂಟಾಗುವ ವಿಳಂಬ.

2. ಹಲವಾರು ಪ್ರಕರಣಗಳಲ್ಲಿ ಸಂಬಂಧಪಟ್ಟ ಪಂಚಾಯತ್‌ರಾಜ್ ಸಂಸ್ಥೆಗಳು ವಿದ್ಯುತ್ ಸಂಪರ್ಕ ಪಡೆಯುಲು ಪಾಲಿಸಬೇಕಾದ ನಿಯಮಗಳನ್ನು ಪಾಲಿಸುವಲ್ಲಿ ಮಾಡುತ್ತಿರುವ ವಿಳಂಬ.

3. ಕೆಲವು ಪ್ರಕರಣಗಳಲ್ಲಿ ಕಾಮಗಾರಿಗಳಿಗೆ ಅವಶ್ಯವಿರುವ ಸಾಮಗ್ರಿಗಳ ಪೂರೈಕೆಯಲ್ಲಿ ಉಂಟಾಗಬಹುದಾದ ವಿಳಂಬ.

ಇ) ವಿದ್ಯುತ್ ಸರಬರಾಜು ಕಂಪನಿಗಳು ಕುಡಿಯುವ ನೀರು ಸರಬರಾಜು ಯೋಜನೆಗಳಿಗೆ ಮೊದಲ ಆದ್ಯತೆಯ ಮೇರೆಗೆ ವಿದ್ಯುತ್ ಸಂಪರ್ಕ ಕಲ್ಪಿಸುತ್ತಿವೆ. ಪ್ರಸ್ತುತ ವಿದ್ಯುದೀಕರಣಕ್ಕಾಗಿ ಬಾಕಿ ಉಳಿದಿರುವ 228 ಕುಡಿಯುವ ನೀರಿನ ಯೋಜನೆಗಳ ಕಾಮಗಾರಿಗಳನ್ನು ಏಪ್ರಿಲ್ 2006ರ ಅಂತ್ಯದ ವೇಳೆಗೆ ಪೂರ್ಣಗೊಳಿಸಲು ವಿದ್ಯುತ್ ಸರಬರಾಜು ಕಂಪನಿಗಳು ಎಲ್ಲಾ ಪ್ರಯತ್ನಗಳನ್ನು ಮಾಡುತ್ತಿವೆ.

ಈ) ಕುಡಿಯುವ ನೀರಿನ ಯೋಜನೆಗಳಿಗೆ ಮೊದಲ ಆದ್ಯತೆ ಮೇರೆಗೆ ವಿದ್ಯುತ್ ಸರಬರಾಜು ಕಂಪನಿಗಳು ವಿದ್ಯುತ್ ಸಂಪರ್ಕವನ್ನು ಕಲ್ಪಿಸುತ್ತಿವೆ. ಸಕಾಲದಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸಾಧ್ಯವಾದ ಎಲ್ಲಾ ಪ್ರಯತ್ನಗಳು ವಿದ್ಯುತ್ ಸರಬರಾಜು ಕಂಪನಿಗಳು ಮಾಡುತ್ತಿವೆ.

20, (113) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬ (ಬಸವಕಲ್ಯಾಣ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಬಸವಕಲ್ಯಾಣದಲ್ಲಿರುವ ವಿದ್ಯುತ್ ಟ್ರಾನ್ಸ್ ಫಾರ್ಮರ್‌ಗಳ ಸಂಖ್ಯೆ ಎಷ್ಟು;

ಆ) ಇವುಗಳಲ್ಲಿ ಎಷ್ಟು ಸುವ್ಯವಸ್ಥೆಯಲ್ಲಿವೆ ಹಾಗೂ ಎಷ್ಟು ದುಸ್ಥಿತಿಯಲ್ಲಿವೆ;

ಇ) ಕೆಟ್ಟಿರುವ ವಿದ್ಯುತ್ ಟ್ರಾನ್ಸ್ ಫಾರ್ಮರ್‌ಗಳನ್ನು ದುರಸ್ಥಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಕೆಟ್ಟಿರುವ ವಿದ್ಯುತ್ ಟ್ರಾನ್ಸ್ ಫಾರ್ಮರ್‌ಗಳ ವಿವರಗಳನ್ನು ಗ್ರಾಮವಾರು ವಿವರಗಳನ್ನು ನೀಡುವುದು);